# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

### ವಾರ್ಡ್ ನಂ.71 : ಹೆಗ್ಗನಹಳ್ಳಿ

**ದಿನಾಂಕ: 20.11.2021 ರಂದು ಬೆಳಿಗ್ಗೆ 11.00 ಗಂಟೆಗೆ ಶ್ರೀ ಬಿ.ಆರ್.ರವಿಕುಮಾರ್, ನೋಡಲ್ ಅಧಿಕಾರಿ, ವಾರ್ಡ್ 71 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

ಸಭೆಯಲ್ಲಿ ಹಾಜರಿದ್ದವರು:

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಬಿ.ಆರ್.ರವಿಕುಮಾರ್ | ನೋಡಲ್ ಅಧಿಕಾರಿ-ವಾರ್ಡ್ ನಂ.71 |
| 2 | ಶ್ರೀ ಅವೀಶ್ ಹೆಚ್ ಎಂ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು-ವಾರ್ಡ್ 71 |
| 3 | ಶ್ರೀ ಡಾ.ಅಂಬರೀಶ್ | ಕೋವಿಡ್ ಮೆಡಿಕಲ್ ಆಫೀಸರ್ |
| 4 | ಶ್ರೀ ಗಂಗರೆಡ್ಡಿ | ಕಂದಾಯ ಪರಿವೀಕ್ಷಕರು |
| 5 | ಶ್ರೀ ಹೆಚ್ ಟಿ ಮುನಿರಾಜು | ಕಂದಾಯ ವಸೂಲಿಗಾರರು |
| 6 | ಶ್ರೀ ಮಹೇಶ್ ಜೆ ಸಿ | ಘನತ್ಯಾಜ್ಯ ಇಲಾಖೆ |
| 7 | ಶ್ರೀಮತಿ ಅನುಪಮ | ಕಂದಾಯ ವಸೂಲಿಗಾರರು |
| 8 | ಶ್ರೀ ಕಮಲಪ್ಪ | ಕಿರಿಯ ಆರೋಗ್ಯ ಪರಿವೀಕ್ಷಕರು-ವಾರ್ಡ್ 71 |

:ನಡಾವಳಿಯ ವರದಿ:

- ಕಾರ್ಯದರ್ಶಿಗಳಾದ ಶ್ರೀ ಅವೀಶ್ ಹೆಚ್ ಎಂ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

**ವಿಷಯ ಸಂಖ್ಯೆ: 1:- ಇತ್ತೀಚೆಗೆ ಸುರಿದ ಭಾರೀ ಮಳೆಯಿಂದಾಗೀ ಹಾನಿಯಾಗಿರುವ ರಸ್ತೆ & ಚರಂಡಿಗಳನ್ನು ದುರಸ್ತಿ ಪಡಿಸುವ ಬಗ್ಗೆ**

ಇತ್ತೀಚೆಗೆ ಸುರಿದ ಭಾರೀ ಮಳೆಯಿಂದಾಗೀ ಹಾನಿಯಾಗಿರುವ ರಸ್ತೆ & ಚರಂಡಿಗಳನ್ನು ದುರಸ್ತಿ ಪಡಿಸಲು ಕೈಗೊಳ್ಳಬೇಕಾಗಿರುವ ಕಾಮಗಾರಿಗಳ ಬಗ್ಗೆ ಚರ್ಚಿಸಲಾಯಿತು ಹಾಗೂ ಈ ಕೆಳಕಂಡ ಕಾಮಗಾರಿಗಳಿಗೆ ಅನುದಾನ ನಿರೀಕ್ಷಿಸಿ ಅನುಮೋದನೆಗೆ ಪ್ರಸ್ತಾವನೆ ಸಲ್ಲಿಸಲು ತೀರ್ಮಾನಿಸಲಾಯಿತು.

| Sl. No. | Name of Work | Estimated Cost (Rs. in Lakhs) |
|---|---|---|
| 1 | Improvements to roads and drains at 10th Cross, 2nd Main Road, 9th Cross, Neelagiri thopu main road and its surrounding crosses in Hoysalanagara in Ward No.71 | 99.00 |

| | | |
|---|---|---|
| 2 | Improvements to roads and drains at 8th Main Road, 1st Main Road and its surrounding crosses in Lakshman nagara in Ward No.71 | 98.00 |
| 3 | Improvements to roads and drains at Omshakthi Temple Road, Banashankary Bakery road, 2nd Cross and its surrounding crosses in Sanjeevini Nagara 3rd Stage in Ward No.71 | 99.00 |
| 4 | Improvements to roads and drains at 6th Main, 40 ft Road and its surrounding crosses in Sanjeevini Nagara 1st Stage in Ward No.71 | 89.00 |
| 5 | Improvements to roads and drains at 7th Main road, 7th A Main, 7th B Main and its surrounding crosses in Maruthi Nagara in Ward No.71 | 90.00 |
| 6 | Improvements to roads and drains at 1st Main road, 2nd Main road and its surrounding crosses in Nadakerappa Industrial Area in Ward No.71 | 90.00 |
| | **Total Amount** | **565.00** |

- <u>ವಿಷಯ ಸಂಖ್ಯೆ:2</u>
  **ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರಿಗೆ ನೋಟೀಸ್ ಜಾರಿ ಮಾಡುವ ಬಗ್ಗೆ:**

ನೋಡಲ್ ಅಧಿಕಾರಿಗಳು ಮಾತನಾಡಿ, ವಾರ್ಡ್‌ನ ಹಲವು ಕಡೆಗಳಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ವತಿಯಿಂದ ರಸ್ತೆ ಅಗೆದಿದ್ದು Restoration ಮಾಡಿರುವುದಿಲ್ಲ ಎಂಬುದಾಗೀ ದೂರುಗಳು ಬಂದಿದ್ದು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರಿಗೆ ನೋಟೀಸ್ ಜಾರಿ ಮಾಡುವಂತೆ ಸಹಾಯಕ ಅಭಿಯಂತರರಿಗೆ ತಿಳಿಸಿದರು.

ವಾರ್ಡ್ 71ರ ಸಹಾಯಕ ಅಭಿಯಂತರರು ಮಾತನಾಡಿ ಈಗಾಗಲೇ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರಿಗೆ ಕತ್ತರಿಸಿರುವ ರಸ್ತೆಗಳನ್ನು Restoration ಮಾಡುವಂತೆ ನೋಟೀಸ್ ಜಾರಿ ಮಾಡಲಾಗಿದೆ ಎಂದು ತಿಳಿಸಿದರು.

- <u>ವಿಷಯ ಸಂಖ್ಯೆ:3 :-</u> **ಅನಧಿಕೃತ ಕಟ್ಟಡಗಳಿಗೆ ನೋಟೀಸ್ ಜಾರಿ ಮಾಡುವ ಬಗ್ಗೆ:**

ನೋಡಲ್ ಅಧಿಕಾರಿರವರು, ಈ ಹಿಂದಿನ ಸಭೆಯಲ್ಲಿ ಚರ್ಚಿಸಿದಂತೆ ಅನಧಿಕೃತ ಕಟ್ಟಡಗಳಿಗೆ ನೋಟೀಸ್ ಜಾರಿ ಮಾಡಲಾಗುತ್ತಿದೆಯೇ? ಎಂದು ಪ್ರಸ್ತಾಪಿಸಲಾಗೀ. ಇದಕ್ಕೆ ವಾರ್ಡ್ 71ರ ಸಹಾಯಕ ಅಭಿಯಂತರರು ಪ್ರತಿಕ್ರಿಯಿಸಿ ಸಹಾಯಕ ಕಂದಾಯ ಅಧಿಕಾರಿರವರ ಕಛೇರಿಯಿಂದ ಅನಧಿಕೃತ ಕಟ್ಟಡಗಳ ವಿವರಗಳನ್ನು ಪಡೆದು, ಸಹಾಯಕ ಕಂದಾಯ ಅಧಿಕಾರಿರವರ ಕಛೇರಿಯ ಸಿಬ್ಬಂದಿಯವರ ಸಹಕಾರದೊಂದೊಗೆ ದಿನವೂ ನೋಟೀಸ್ ನೀಡಲಾಗುತ್ತಿದೆ ಎಂದು ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ಮತ್ತು ಸದಸ್ಯರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡ್ ನಂ.71ರ ಅಭಿವೃದ್ಧಿಗೆ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಅವೀಶ್ ಹೆಚ್.ಎಂ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ಮತ್ತು ಸದಸ್ಯರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ 71, ಹೆಗ್ಗನಹಳ್ಳಿ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ
ವಾರ್ಡ್ ನಂ.71, ಹೆಗ್ಗನಹಳ್ಳಿ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು:

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.71 ರವರ ಮಾಹಿತಿಗಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ